**All India Radio: Bangalore**
**National Bulletin In Kannada**
**11.08.2026 1.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**11.08.2026 1.10 hrs**

**<>><><*><><<>**

ಮುಖ್ಯಾಂಶಗಳು

**೧. ಉಭಯ ಸದನಗಳಲ್ಲಿ ಕೇಂದ್ರ ಗೃಹ ಸಚಿವರ ಹೇಳಿಕೆ ಆಗ್ರಹಿಸಿ ಗದ್ದಲ; ಕಲಾಪ ಮಧ್ಯಾಹ್ನ ೨ ಗಂಟೆಗೆ ಮುಂದೂಡಿಕೆ**

**೨. ಜಾರ್ಖಂಡ್‌ನಲ್ಲಿ ಪ್ರತಿಭಟನಾನಿರತ ವಿದ್ಯಾರ್ಥಿಗಳ ವಿರುದ್ಧದ ಪೊಲೀಸ್ ಕ್ರಮ ಖಂಡಿಸಿ ಎನ್‌ಡಿಎ ಸಂಸದರಿಂದ ಪ್ರತಿಭಟನಾ ಮೆರವಣಿಗೆ**

**೩. ಸ್ವಾತಂತ್ರ್ಯ ಹೋರಾಟಗಾರ ಖುದಿರಾಮ್ ಬೋಸ್ ಅವರ ೧೧೮ನೇ ಪುಣ್ಯ ಸ್ಮರಣೆ; ಗಣ್ಯರಿಂದ ಗೌರವ ನಮನ**

**೪. ಕೆನಡಾ ಓಪನ್ ಟೆನ್ನಿಸ್; ಉಕ್ರೇನ್‌ನ ಸ್ವಿಟೊಲಿನಾ ಹಾಗೂ ಪೋಲೆಂಡ್‌ನ ಇಗಾ ಸ್ವಿಯಾಟೆಕ್ ಸೆಮಿಫೈನಲ್ ಪ್ರವೇಶ**

**೫. ಗ್ರ್ಯಾಂಡ್ ಚೆಸ್ ಟೂರ್ ಸಿಂಕ್ ಫೀಲ್ಡ್ ಕಪ್; ಭಾರತದ ಗ್ರ್ಯಾಂಡ್ ಮಾಸ್ಟರ್ ಪ್ರಜ್ಞಾನಂದ ಮೊದಲ ಸುತ್ತು ಡ್ರಾ**

**<>><><*><><<>**

ಪ್ರಶ್ನೋತ್ತರ ವೇಳೆಯಲ್ಲಿ ವಿಪಕ್ಷಗಳು ನಡೆಸಿದ ತೀವ್ರ ಗದ್ದಲ ಮತ್ತು ಘೋಷಣೆಗಳ ನಡುವೆ ಸಂಸತ್ತಿನ ಉಭಯ ಸದನಗಳ ಕಲಾಪವನ್ನು ಇಂದು ಮಧ್ಯಾಹ್ನ ೨ ಗಂಟೆಯವರೆಗೆ ಮುಂದೂಡಲಾಗಿದೆ. ಲೋಕಸಭೆ ಕಲಾಪದ ವೇಳೆ, ಲೋಕಸಭಾಧ್ಯಕ್ಷ ಓಂ ಬಿರ್ಲಾ ಸಂಸದರಲ್ಲಿ ಸದನದ ಶಿಸ್ತು ಕಾಯ್ದುಕೊಳ್ಳುವಂತೆ ಮತ್ತು ಕಲಾಪ ಸುಸೂತ್ರವಾಗಿ ನಡೆಯಲು ಸಹಕರಿಸುವಂತೆ ಮನವಿ ಮಾಡಿದರು. ನೀಟ್ ಪರೀಕ್ಷಾರ್ಥಿಗಳ ಪ್ರತಿಭಟನೆಯ ಮೇಲಿನ ಪೊಲೀಸ್ ಕ್ರಮದ ಕುರಿತು ಚರ್ಚಿಸಲು ಗೃಹ ಸಚಿವರು ಸಿದ್ಧರಿರುವುದಾಗಿ ಕೇಂದ್ರ ಸರ್ಕಾರ ತಿಳಿಸಿದೆ ಎಂದು ತಿಳಿಸಿದ ಸಭಾಧ್ಯಕ್ಷರು, ಗದ್ದಲ ನಿಲ್ಲದಿದ್ದಾಗ ಕಲಾಪವನ್ನು ಮುಂದೂಡಿದರು. ಪ್ರತಿಭಟನಾನಿರತ ವಿದ್ಯಾರ್ಥಿಗಳ ವಿರುದ್ಧ ನಡೆದ ಪೊಲೀಸ್ ಕ್ರಮದ ಕುರಿತು ಗೃಹ ಸಚಿವ ಅಮಿತ್ ಶಾ ಅವರೇ ನೇರವಾಗಿ ಸದನದಲ್ಲಿದ್ದು ಉತ್ತರಿಸಬೇಕೆಂದು ವಿಪಕ್ಷಗಳು ಆಗ್ರಹಿಸಿದವು.

**<>><><*><><<>**

ಶೂನ್ಯ ವೇಳೆಯಲ್ಲಿ ಉಭಯ ಪಕ್ಷಗಳ ಸದಸ್ಯರ ನಡುವೆ ಏರ್ಪಟ್ಟ ತೀವ್ರ ವಾಗ್ವಾದ ಮತ್ತು ಗದ್ದಲದಿಂದಾಗಿ ರಾಜ್ಯಸಭಾ ಕಲಾಪಕ್ಕೂ ಕೆಲಕಾಲ ಅಡ್ಡಿ ಉಂಟಾಗಿ, ಕಲಾಪ ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಗಿದೆ. ಬೆಳಿಗ್ಗೆ ಕಲಾಪ ಆರಂಭವಾಗುತ್ತಿದ್ದಂತೆ ವಿವಿಧ ಸಚಿವಾಲಯಗಳ ಪತ್ರಗಳು ಹಾಗೂ ಸಂಸದೀಯ ಸಮಿತಿಗಳ ವರದಿಗಳನ್ನು ಸದನದ ಮುಂದಿಡಲಾಯಿತು. ಬಳಿಕ ಸಭಾಪತಿ ಸಿ. ಪಿ. ರಾಧಾಕೃಷ್ಣನ್ ಅವರು ತುರ್ತು ವಿಷಯಗಳ ಚರ್ಚೆಗೆ ಅವಕಾಶ ನೀಡಿದಾಗ ವಿಪಕ್ಷಗಳು ಘೋಷಣೆ ಕೂಗಲು ತೊಡಗಿದವು. ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಮಾತನಾಡಲು ಯತ್ನಿಸಿದರಾದರೂ ಗೊಂದಲದ ವಾತಾವರಣ ಮುಂದುವರಿದಿದ್ದರಿಂದ, ಸಭಾಪತಿಯವರು ಕಲಾಪವನ್ನು ಮಧ್ಯಾಹ್ನ ೧೨ ಗಂಟೆಗೆ ಮುಂದೂಡಿದರು. ೧೨ ಗಂಟೆಗೆ ಕಲಾಪ ಪುನರಾರಂಭಗೊಂಡಾಗ ಸಭಾಪತಿಗಳು, ಪ್ರಶ್ನೋತ್ತರ ಕಲಾಪ ಮುಂದುವರೆಸಲು ಯತ್ನಿಸಿದರು. ಆದರೆ, ಸುಗಮ ಕಲಾಪ ನಡೆಸಲು ಸಹಕಾರ ಕೋರಿ ಮನವಿ ಮಾಡಿದರೂ, ಗದ್ದಲ ನಿಲ್ಲದ ಕಾರಣ ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಿದರು.

**<>><><*><><<>**

ಜಾರ್ಖಂಡ್‌ನಲ್ಲಿ ಪ್ರತಿಭಟನಾನಿರತ ವಿದ್ಯಾರ್ಥಿಗಳ ವಿರುದ್ಧ ನಡೆದ ಪೊಲೀಸ್ ಕ್ರಮವನ್ನು ಖಂಡಿಸಿ ಎನ್‌ಡಿಎ ಸಂಸದರು ಇಂದು ಸಂಸತ್ ಆವರಣದಲ್ಲಿ ಮೆರವಣಿಗೆ ನಡೆಸಿದರು. ವಿದ್ಯಾರ್ಥಿಗಳ ಪ್ರತಿಭಟನೆ ಕುರಿತು ಗೃಹ ಸಚಿವ ಅಮಿತ್ ಶಾ ಉತ್ತರಿಸಲು ಸಿದ್ಧರಿದ್ದರೂ, ವಿರೋಧ ಪಕ್ಷಗಳು ಚರ್ಚೆಯಿಂದ ದೂರ ಸರಿಯುತ್ತಿವೆ ಎಂದು ಎನ್‌ಡಿಎ ಆರೋಪಿಸಿದೆ. ಕೇಂದ್ರ ಸಚಿವ ಸಂಜಯ್ ಸೇಠ್, ವಿದ್ಯಾರ್ಥಿಗಳ ಧ್ವನಿಯನ್ನು ಹತ್ತಿಕ್ಕಲು ಜಾರ್ಖಂಡ್ ಸರ್ಕಾರ ಬಲಪ್ರಯೋಗ ಮಾಡುತ್ತಿದೆ ಎಂದು ಆರೋಪಿಸಿದರು.

**<>><><*><><<>**

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ಕೇರಳಂ ರಾಜ್ಯದ ಹೆಸರು ಬದಲಾವಣೆಗೆ ಸಂಬಂಧಿಸಿದ ಕೇರಳ ಹೆಸರು ಬದಲಾವಣೆ ಮಸೂದೆ-೨೦೨೫ ಹಾಗೂ ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ ತಿದ್ದುಪಡಿ ಮಸೂದೆ-೨೦೨೫ ಅನ್ನು ಇಂದು ಲೋಕಸಭೆಯಲ್ಲಿ ಪರಿಗಣನೆ ಮತ್ತು ಅಂಗೀಕಾರಕ್ಕಾಗಿ ಮಂಡಿಸಲಿದ್ದಾರೆ. ರಾಜ್ಯಸಭೆಯಲ್ಲಿ ಇಂದು ನ್ಯಾಯಮಂಡಳಿ ಸುಧಾರಣಾ ಮಸೂದೆ-೨೦೨೫ ಅನ್ನು ಪರಿಗಣನೆ ಮತ್ತು ಅಂಗೀಕಾರಕ್ಕಾಗಿ ಕೈಗೆತ್ತಿಕೊಳ್ಳುವ ನಿರೀಕ್ಷೆಯಿದೆ. ಕಾನೂನು ಮತ್ತು ನ್ಯಾಯ ಖಾತೆ ರಾಜ್ಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಮಸೂದೆಯನ್ನು ಮಂಡಿಸಲಿದ್ದಾರೆ. ವಿವಿಧ ನ್ಯಾಯಮಂಡಳಿಗಳ ಅಧ್ಯಕ್ಷರು ಮತ್ತು ಸದಸ್ಯರ ಅರ್ಹತೆ, ನೇಮಕಾತಿ, ಸೇವಾ ಷರತ್ತುಗಳು ಹಾಗೂ ನ್ಯಾಯಮಂಡಳಿಗಳ ಆಡಳಿತ ಮತ್ತು ಕಾರ್ಯನಿರ್ವಹಣೆಯಲ್ಲಿ ದಕ್ಷತೆ, ಸ್ವಾತಂತ್ರ್ಯ, ಪಾರದರ್ಶಕತೆ ಮತ್ತು ಏಕರೂಪತೆ ಖಚಿತಪಡಿಸುವುದು ಮಸೂದೆಯ ಉದ್ದೇಶವಾಗಿದೆ. ರಾಷ್ಟ್ರೀಯ ನ್ಯಾಯಮಂಡಳಿ ಆಯೋಗ ಸ್ಥಾಪಿಸುವ ಪ್ರಸ್ತಾವವೂ ಮಸೂದೆಯಲ್ಲಿದೆ.

**<>><><*><><<>**

ಎನ್‌ಡಿಎ ಸಂಸದೀಯ ಪಕ್ಷದ ಸಾಪ್ತಾಹಿಕ ಸಭೆ 'ಮಂಗಲ್ ಮಿಲನ್' ಇಂದು ನವದೆಹಲಿಯ ಸಂಸತ್ ಭವನದ ಆವರಣದಲ್ಲಿ ನಡೆಯಿತು. ಪ್ರಧಾನಮಂತ್ರಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ಅಧ್ಯಕ್ಷ ನಿತಿನ್ ನಬಿನ್ ಸೇರಿದಂತೆ ಎನ್‌ಡಿಎಯ ಇತರ ನಾಯಕರು ಸಭೆಯಲ್ಲಿ ತ್ರಿವರ್ಣ ಧ್ವಜವನ್ನು ಕೈಯಲ್ಲಿ ಹಿಡಿದು, ರಾಷ್ಟ್ರಭಕ್ತಿಯ ಸಂದೇಶ ಸಾರಿದರು.

**<>><><*><><<>**

ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರ ಖುದಿರಾಮ್ ಬೋಸ್ ಅವರ ೧೧೯ನೇ ಹುತಾತ್ಮ ದಿನದ ಅಂಗವಾಗಿ ಇಂದು ದೇಶ ಅವರಿಗೆ ಗೌರವ ನಮನ ಸಲ್ಲಿಸುತ್ತಿದೆ. ೧೯೦೮ರ ಆಗಸ್ಟ್ ೧೧ರಂದು ಬ್ರಿಟಿಷರಿಂದ ಗಲ್ಲಿಗೇರಿಸಲ್ಪಟ್ಟ ಬಂಗಾಳದ ಮೊದಲ ಭಾರತೀಯ ಕ್ರಾಂತಿಕಾರಿಗಳಲ್ಲಿ ಖುದಿರಾಮ್ ಬೋಸ್ ಪ್ರಮುಖರಾಗಿದ್ದರು. ಅವರ ಸ್ಮರಣಾರ್ಥ ದೇಶಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಅತ್ಯಂತ ಚಿಕ್ಕ ವಯಸ್ಸಿನಲ್ಲೇ ಸ್ವಾತಂತ್ರ್ಯ ಚಳವಳಿಗೆ ಧುಮುಕಿದ, ಬ್ರಿಟಿಷರ ವಸಾಹತುಶಾಹಿ ಆಡಳಿತದ ವಿರುದ್ಧದ ಹೋರಾಟದಲ್ಲಿ ಭಾಗವಹಿಸಿದ ಅತ್ಯಂತ ಕಿರಿಯ ಹುತಾತ್ಮರಲ್ಲಿ ಒಬ್ಬರಾಗಿದ್ದರು.

ಮಾತೃಭೂಮಿಗಾಗಿ ತಮ್ಮ ಪ್ರಾಣವನ್ನು ಅರ್ಪಿಸಿದ ಖುದಿರಾಮ್ ಬೋಸ್ ಅವರ ತ್ಯಾಗ, ರಾಷ್ಟ್ರೀಯ ಪ್ರಜ್ಞೆಯನ್ನು ಎಂದಿಗೂ ಪ್ರೇರೇಪಿಸುತ್ತಲೇ ಇರುತ್ತದೆ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಖುದಿರಾಮ್ ಬೋಸ್, ದೇಶಭಕ್ತಿ ಮತ್ತು ಸಮರ್ಪಣಾ ಭಾವ ದೇಶದ ಯುವಕರಲ್ಲಿ ಶೌರ್ಯ, ಸ್ವಾಭಿಮಾನ ಮತ್ತು ದೇಶಸೇವೆಯ ಮನೋಭಾವವನ್ನು ಪ್ರೇರೇಪಿಸುತ್ತದೆ ಎಂದು ಗೃಹ ಸಚಿವ ಅಮಿತ್ ಶಾ ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ.

**<>><><*><><<>**

ದೆಹಲಿ ವಿಧಾನಸಭೆ ಆವರಣದಲ್ಲಿ ಇಂದು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ವಿಧಾನಸಭೆ ಸ್ಪೀಕರ್ ವಿಜೇಂದರ್ ಗುಪ್ತಾ ಸೇರಿದಂತೆ ಶಾಸಕರು ಹರ್ ಘರ್ ತಿರಂಗಾ ಯಾತ್ರೆಯಲ್ಲಿ ಪಾಲ್ಗೊಂಡರು. ಮಹಾತ್ಮ ಗಾಂಧೀಜಿ ಅವರ ಪ್ರತಿಮೆಯಿಂದ ಆರಂಭವಾದ ಯಾತ್ರೆ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಯ ಬಳಿ ಮುಕ್ತಾಯವಾಯಿತು. ದೇಶದ ಏಕತೆ, ಪ್ರಜಾಸತ್ತಾತ್ಮಕ ಮೌಲ್ಯಗಳು ಹಾಗೂ ಸಂವಿಧಾನದಲ್ಲಿ ಪ್ರತಿಪಾದಿಸಿರುವ ಆದರ್ಶಗಳ ಬದ್ಧತೆಯನ್ನು ಸಾರುವ ಸಂಕೇತವಾಗಿ ಈ ತಿರಂಗಾ ಯಾತ್ರೆ ಆಯೋಜಿಸಲಾಗಿತ್ತು.

**<>><><*><><<>**

ಉತ್ತರ ಪ್ರದೇಶದಾದ್ಯಂತ ಎಲ್ಲ ಮದರಸಾಗಳಲ್ಲಿ 'ಹರ್ ಘರ್ ತಿರಂಗಾ' ಅಭಿಯಾನಕ್ಕೆ ಸಂಬಂಧಿಸಿದ ಕಾರ್ಯಕ್ರಮಗಳನ್ನು ಉತ್ಸಾಹದಿಂದ ಆಯೋಜಿಸಲಾಗುತ್ತಿದೆ ಮದರಸಾಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮತ್ತು ಯುವಕರು ಅಭಿಯಾನದಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸಬೇಕು ಎಂದು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ದಾನಿಶ್ ಅನ್ಸಾರಿ ನಿರ್ದೇಶನ ನೀಡಿದ್ದಾರೆ. ಮದರಸಾಗಳಲ್ಲಿ ರಾಷ್ಟ್ರಧ್ವಜಾರೋಹಣ, ರಾಷ್ಟ್ರಗೀತೆ ಗಾಯನ, ದೇಶಭಕ್ತಿ ಕಾರ್ಯಕ್ರಮಗಳು ಹಾಗೂ ಮಹಾನ್ ಸ್ವಾತಂತ್ರ್ಯ ಹೋರಾಟಗಾರರ ಕೊಡುಗೆಗಳನ್ನು ಬಿಂಬಿಸುವ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

**<>><><*><><<>**

ಕಾನ್ವರ್ ಯಾತ್ರೆಯ ಹಿನ್ನೆಲೆಯಲ್ಲಿ ಹರಿದ್ವಾರದಲ್ಲಿ ಭಕ್ತಿಯ ಸಮೂಹವೇ ಕಂಡುಬಂದಿದೆ. ನಿನ್ನೆ ಸಂಜೆ ವೇಳೆಗೆ ೪ ಕೋಟಿ ೪೩ ಲಕ್ಷದ ೭೮ ಸಾವಿರಕ್ಕೂ ಅಧಿಕ ಭಕ್ತರು ಹರಿದ್ವಾರದಿಂದ ಪವಿತ್ರ ಗಂಗಾಜಲವನ್ನು ಹೊತ್ತು ತಮ್ಮ ಊರುಗಳತ್ತ ಪ್ರಯಾಣ ಬೆಳೆಸಿದ್ದಾರೆ. ಇಂದು ಶ್ರಾವಣ ಶಿವರಾತ್ರಿ ಹಿನ್ನೆಲೆಯಲ್ಲಿ ಅಪಾರ ಸಂಖ್ಯೆಯ ಭಕ್ತರು ವಿವಿಧ ಶಿವ ದೇವಾಲಯಗಳಲ್ಲಿ ಶಿವನಿಗೆ ಗಂಗಾಜಲ ಅರ್ಪಿಸುತ್ತಿದ್ದು, ಇದರೊಂದಿಗೆ ಈ ವರ್ಷದ ಕಾನ್ವರ್ ಯಾತ್ರೆ ಮುಕ್ತಾಯಗೊಳ್ಳುತ್ತಿದೆ. ಸುಗಮ ಹಾಗೂ ಸುರಕ್ಷಿತ ಕಾನ್ವರ್ ಯಾತ್ರೆ ಖಚಿತಪಡಿಸಿಕೊಳ್ಳಲು

ಪ್ರಮುಖ ಸ್ನಾನಘಟ್ಟಗಳು, ಕಾನ್ವರ್ ಮಾರ್ಗಗಳು ಮತ್ತು ಸೂಕ್ಷ್ಮ ಪ್ರದೇಶಗಳಲ್ಲಿ ಭದ್ರತೆ, ಸಂಚಾರ, ಆರೋಗ್ಯ ಹಾಗೂ ಸ್ವಚ್ಛತಾ ವ್ಯವಸ್ಥೆಗಳನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ.

**<>><><*><><<>**

ಕೈಗೆಟುಕುವ ವಸತಿ ವ್ಯವಸ್ಥೆಯು ಸುಸ್ಥಿರ ಪರಿಸರ ವ್ಯವಸ್ಥೆಯಾಗಿ ರೂಪುಗೊಳ್ಳಬೇಕು ಎಂದು ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಸತ್ಯೇಂದ್ರ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ 'ಕೈಗೆಟುಕುವ ವಸತಿಯನ್ನು ಮರುರೂಪಿಸುವುದು' ಕುರಿತ ರಾಷ್ಟ್ರೀಯ ಸಮ್ಮೇಳನದಲ್ಲಿ ಅವರು ಮಾತನಾಡಿದರು.

**<>><><*><><<>**

ಟೊರಂಟೊದಲ್ಲಿ ನಡೆಯುತ್ತಿರುವ ಕೆನಡಿಯನ್ ಓಪನ್ ಟೆನ್ನಿಸ್ ಟೂರ್ನಿಯ ಮಹಿಳಾ ವಿಭಾಗದಲ್ಲಿ ಉಕ್ರೇನ್‌ನ ಎಲಿನಾ ಸ್ವಿಟೊಲಿನಾ ಮತ್ತು ಪೋಲೆಂಡ್‌ನ ಇಗಾ ಸ್ವಿಯಾಟೆಕ್ ಸೆಮಿಫೈನಲ್ ಪ್ರವೇಶಿಸಿದ್ದಾರೆ.  ಇಂದು ನಡೆದ ಕ್ವಾರ್ಟರ್ ಫೈನಲ್ ಪಂದ್ಯಗಳಲ್ಲಿ ಸ್ವಿಯಾಟೆಕ್ ರಷ್ಯಾದ ಎಕೆಟರಿನ ಎಲೆಕ್ಸಾಂಡ್ರುವಾ ವಿರುದ್ಧ ಗೆಲುವು ದಾಖಲಿಸಿದರೆ, ಇಗಾ ಸ್ವಿಯಾಟೆಕ್ ರಷ್ಯಾದ ಡಯಾನಾ ಶ್ನೈಡರ್ ವಿರುದ್ಧ ಗೆಲುವು ದಾಖಲಿಸಿ ಅಂತಿಮ ನಾಲ್ಕರ ಘಟ್ಟ ಪ್ರವೇಶಿಸಿದರು.

**<>><><*><><<>**

ಗ್ರ್ಯಾಂಡ್ ಚೆಸ್ ಟೂರ್‌ನ ಪ್ರಮುಖ ಪಂದ್ಯಾವಳಿಯಾದ ಸಿಂಕ್ ಫೀಲ್ಡ್ ಕಪ್‌ನ ಮೊದಲ ಸುತ್ತಿನಲ್ಲಿ ಭಾರತದ ಯುವ ಗ್ರ್ಯಾಂಡ್ ಮಾಸ್ಟರ್ ಆರ್.ಪ್ರಜ್ಞಾನಂದ ಅಮೆರಿಕಾದ ಸಾಮ್ಯುಯಲ್ ಸೇವಿಯನ್ ವಿರುದ್ಧ ಸುಲಭ ಡ್ರಾ ಸಾಧಿಸುವ ಮೂಲಕ ತಮ್ಮ ಸವಾಲನ್ನು ಆರಂಭಿಸಿದ್ದಾರೆ.  ಮತ್ತೊಂದೆಡೆ ಅಮೆರಿಕಾದ ಫ್ಯಾಬಿಯಾನೊ ಕರುವಾನೊ ಮೊದಲ ಸುತ್ತಿನಲ್ಲಿ ಗೆಲುವು ದಾಖಲಿಸಿ ಶುಭಾರಂಭ ಮಾಡಿದ ಏಕೈಕ ಆಟಗಾರರಾಗಿದ್ದಾರೆ. ಇನ್ನಿತರ ಪ್ರಮುಖ ಆಟಗಾರರ ಪಂದ್ಯಗಳೂ ಡ್ರಾನಲ್ಲಿ ಅಂತ್ಯಗೊಂಡಿವೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**